ಕರ್ನಾಟಕ ವಿಧಾನ ಪರಿಷತ್ತು

ಸದಸ್ಯರ ಹೆಸರು : ಶ್ರೀ ಅರವಿಂದ ಕುಮಾರ ಅರಳಿ (ವಿಧಾನ ಸಭೆಯಿಂದ ಚುನಾಯಿತರಾದವರು)

ಚುಕ್ಕೆಗುರುತಿಲ್ಲದ ಪ್ರಶ್ನೆ ಸಂಖ್ಯೆ : 56

ಉತ್ತರಿಸಬೇಕಾದ ದಿನಾಂಕ : 29.01.2021.

ಉತ್ತರಿಸಬೇಕಾದ ಸಚಿವರು : ಮಾನ್ಯ ಪಶುಸಂಗೋಪನೆ ಸಚಿವರು.

ಕ್ರ.ಸಂ	ಪ್ರಶ್ನೆಗಳು	ಉತ್ತರಗಳು
ಅ	2016-17 ಮತ್ತು 2017-18ನೇ ಸಾಲಿನಲ್ಲಿ ಬೀದರ್ ಜಿಲ್ಲೆಯಲ್ಲಿ ಸಾಲ ಪಡೆದ ಫಲಾನುಭವಿಗಳು ಸಾಲ ಪಡೆದ ಉದ್ದೇಶಕ್ಕಾಗಿ ಬಳಸಿಕೊಳ್ಳದೆ ಕೇವಲ ಸರ್ಕಾರದಿಂದ ಸಿಗುವ ಸಬ್ಸಿಡಿ ಹಣ ಮಾತ್ರ ಪಡೆದುಕೊಂಡು ಸರ್ಕಾರಕ್ಕೆ ಮೋಸ ಮಾಡಿರುವುದು ಸರ್ಕಾರದ ಗಮನಕ್ಕೆ ಬಂದಿದೆಯೇ: ಬಂದಿದ್ದಲ್ಲಿ, ಅಂತಹ ಫಲಾನುಭವಿಗಳನ್ನು ತನಿಖೆಗೆ ಒಳಪಡಿಸಲಾಗಿದೆಯೇ: ತನಿಖೆ ನಡೆಸುವುದಾದರೆ ಯಾವಾಗ ನಡೆಸಲಾಗುವುದು:	ಬೀದರ್ ಜಿಲ್ಲೆಯಲ್ಲಿ 2014-15, 2015-16 ಮತ್ತು 2016-17ನೇ ಸಾಲಿನಲ್ಲಿ ಕರ್ನಾಟಕ ಕುರಿ ಮತ್ತು ಉಣ್ಣೆ ಅಭಿವೃದ್ಧಿ ನಿಗಮ ನಿಯಮಿತದ ವತಿಯಿಂದ ವಿಶೇಷ ಘಟಕ ಯೋಜನೆ ಮತ್ತು ಗಿರಿಜನ ಉಪಯೋಜನೆಯಡಿ ನೀಡಿರುವ ಸಹಾಯಧನ ಹಂಚಿಕೆಯಲ್ಲಿ ಅವ್ಯವಹಾರ ಆಗಿರುವ ಬಗ್ಗೆ ಸರ್ಕಾರದ ಗಮನಕ್ಕೆ ಬಂದಿರುತ್ತದೆ. ಸದರಿ ಪ್ರಕರಣದಲ್ಲಿ ಭಾಗಿಯಾದ ಆರೋಪಿತ ಅಧಿಕಾರಿಯವರ ವಿರುದ್ಧ ಶಿಸ್ತಿನ ಕ್ರಮಕೈಗೊಳ್ಳಲು ಕ್ರಮ ವಹಿಸಲಾಗಿದೆ. ಫಲಾನುಭವಿಗಳನ್ನು ತನಿಖೆಗೆ ಒಳಪಡಿಸಿರುವುದಿಲ್ಲ. ಆರೋಪಿತ ಅಧಿಕಾರಿಯವರ ವಿರುದ್ಧ ಮಾಡಲಾದ ಆರೋಪಗಳು ಸಾಬೀತಾದಲ್ಲಿ ನಿಯಮಾನುಸಾರ ಫಲಾನುಭವಿಗಳನ್ನು ತನಿಖೆಗೆ ಒಳಪಡಿಸಲು ಕ್ರಮವಹಿಸಲಾಗುವುದು.
ಆ	ಇದರಲ್ಲಿ ಭಾಗಿಯಾಗಿರುವ ಅಧಿಕಾರಿಗಳ ವಿರುದ್ಧ ಕ್ರಮಕೈಗೊಳ್ಳಲಾಗಿದೆಯೇ? (ವಿವರ ನೀಡುವುದು)	ಸದರಿ ಪ್ರಕರಣದಲ್ಲಿ ಭಾಗಿಯಾದ ಆರೋಪಿತ ಅಧಿಕಾರಿಯವರ ವಿರುದ್ಧ ಶಿಸ್ತಿನ ಕ್ರಮಕೈಗೊಳ್ಳಲು ದೋಷಾರೋಪಣಾ ಪಟ್ಟಿ (ಅನುಬಂಧ 1 ರಿಂದ 4) ಹಾಗೂ ಕಾರಣ ಕೇಳಿ ತಿಳುವಳಿಕೆ ಪತ್ರವನ್ನು ಜಾರಿಗೊಳಿಸಲಾಗಿದೆ. ಆರೋಪಿತ ಅಧಿಕಾರಿಯವರು ಸಲ್ಲಿಸಿರುವ ಲಿಖಿತ ರಕ್ಷಣಾ ಹೇಳಿಕೆಗಳನ್ನು ಪರಿಶೀಲಿಸಿ ನಿಯಮಾನುಸಾರ ಮುಂದಿನ ಕ್ರಮವಹಿಸಲಾಗುವುದು.

ಪಸಂಮೀ ಇ-12 ಸಲೆವಿ 2021

ಪ್ರಭು ಬಿ. ಚವ್ಹಾಣ್
ಪಶುಸಂಗೋಪನೆ ಸಚಿವರು